**ಕರ್ನಾಟಕ ಸರ್ಕಾರ**

ಸಂಖ್ಯೆ:ಸಾಉಇ 16 ಎ ಆರ್ ಯು 2019(ಭಾ)

ಸಾರ್ವಜನಿಕ ಉದ್ದಿಮೆಗಳ ಇಲಾಖೆ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು-01. ದಿನಾಂಕ:30.11.2020.

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಾರ್ವಜನಿಕ ಉದ್ದಿಮೆಗಳ ಇಲಾಖೆ

ಇವರಿಗೆ:
ಅಪರ ಮುಖ್ಯ ಮೌಲ್ಯಮಾಪನಾಧಿಕಾರಿ,
ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರ,
ಬೆಂಗಳೂರು-560001.

ಮಾನ್ಯರೆ,

**ವಿಷಯ:** ಮೌಲ್ಯಮಾಪನಾ ಅಧ್ಯಯನಗಳ ಶಿಫಾರಸುಗಳ ಮೇಲೆ ಕೈಗೊಂಡ ವರದಿಗಳ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ & ಸಾಂಖ್ಯಿಕ ಇಲಾಖೆರವರ ಅ.ಸ.ಪತ್ರ ಸಂ.ಕೆಇಎ 11 ಪಿಆರ್‌ಒಸಿ 2019 ದಿನಾಂಕ:20/08/2020.

2. ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರ ರವರ ಪತ್ರ ಸಂ.ಕೆಇಎ 51 ಎಟಿಆರ್ 2019 ದಿನಾಂಕ:13/11/2020.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳಲ್ಲಿ ಕೋರಿರುವಂತೆ, 2016-17ನೇ ಸಾಲಿನಲ್ಲಿ ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರವು ಮೈಸೂರು ಸಕ್ಕರೆ ಕಂಪನಿ ನಿಯಮಿತ ಹಾಗೂ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತಗಳ ಮೌಲ್ಯಮಾಪನವನ್ನು ಕೈಗೊಂಡು ನೀಡಿರುವ ಶಿಫಾರಸುಗಳ ಮೇಲೆ ಕೈಗೊಂಡ ಕ್ರಮಗಳ ಅನುಸರಣಾ ವರದಿಯನ್ನು ಈ ಪತ್ರಕ್ಕೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಎಂ.ಗೋಪಾಲಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರ್ವಜನಿಕ ಉದ್ದಿಮೆಗಳ ಇಲಾಖೆ.

ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರ
ಸ್ವೀಕೃತಿ ಸಂಖ್ಯೆ 616/10
ದಿನಾಂಕ 01/12/2020
ಗಣಕ ಸಂಖ್ಯೆ
ದಿನಾಂಕ

## ಟಿಪ್ಪಣಿ

ಸರ್ಕಾರದ ಪತ್ರ ಸಂಖ್ಯೆ: ವಇ 207 ಹೆಚ್‌ಎಎಂ 2020, ದಿನಾಂಕ: 20.08.2020 ರಲ್ಲಿ ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರವು ನೀಡಿರುವ ಶಿಫಾರಸ್ಸುಗಳ ಕುರಿತು ಪರಿಶೀಲಿಸಿ, ಕೈಗೊಂಡ ಕ್ರಮದ ಬಗ್ಗೆ ಕೋರಲಾದ ವರದಿ.

1. ಆರ್ಥಿಕವಾಗಿ ದುರ್ಬಲ ವರ್ಗಕ್ಕೆ ಸೇರಿದ ನಿವೇಶನರಹಿತ ಜನರು ವಸತಿ ಯೋಜನೆಯಿಂದ ವಂಚಿತರಾಗಿದ್ದಾರೆ. ಕಾರ್ಯಕ್ರಮದ ನಿಜವಾದ ಯಶಸ್ಸಿಗೆ ನಿವೇಶನಗಳನ್ನು ನಿವೇಶನರಹಿತರಿಗೆ ಒದಗಿಸಬೇಕಾಗಿದ್ದು, ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಸೇರಿದವರಿಗೆ ನಿವೇಶನ ಹಂಚಿಕೆಗೆ ಅದರ ಬೆಲೆಯು ನಿರ್ಬಂಧವಾಗಬಾರದು.

ಕ್ರಮ:

ಸರ್ಕಾರವು ವಿವಿಧ ವಸತಿ ಯೋಜನೆಗಳಡಿ ಅರ್ಹ ವಸತಿರಹಿತ ಕುಟುಂಬಗಳಿಗೆ ವಸತಿ ಸೌಕರ್ಯ ಒದಗಿಸುತ್ತಿದೆ. ಯಾವುದೇ ಯೋಜನೆಯಡಿ ವಸತಿ ಸೌಕರ್ಯ ಪಡೆಯಲು ಫಲಾನುಭವಿಯು ಸ್ವಂತ ನಿವೇಶನ ಹೊಂದಿರುವುದು ಕಡ್ಡಾಯವಾಗಿರುತ್ತದೆ. ಆದರೆ ಆರ್ಥಿಕವಾಗಿ ದುರ್ಬಲ ವರ್ಗಕ್ಕೆ ಸೇರಿದ ಅನೇಕ ವಸತಿರಹಿತ ಅರ್ಹ ಕುಟುಂಬಗಳು ನಿವೇಶನ ಹೊಂದಿಲ್ಲದ ಕಾರಣ ವಸತಿ ಸೌಕರ್ಯದಿಂದ ವಂಚಿತರಾಗುತ್ತಿದ್ದಾರೆ. ಇಂತಹ ಕುಟುಂಬಗಳಿಗೆ ನಿವೇಶನ ಒದಗಿಸಲು ಗ್ರಾಮೀಣ ಪ್ರದೇಶದಲ್ಲಿ ಇಂದಿರಾ ಗ್ರಾಮೀಣ ವಸತಿ ನಿವೇಶನ ಯೋಜನೆ ಮತ್ತು ನಗರ ಪ್ರದೇಶದಲ್ಲಿ ವಾಜಪೇಯಿ ನಗರ ನಿವೇಶನ ಯೋಜನೆ ಜಾರಿಯಲ್ಲಿದ್ದು, ನಿವೇಶನ ಹಂಚಿಕೆಗೆ ಸರ್ಕಾರವು ನಿರ್ಧಿಷ್ಟ ಮಾನದಂಡ ನಿಗದಿಪಡಿಸಿರುತ್ತದೆ.

ಮೇಲ್ಕಂಡ ನಿವೇಶನ ಯೋಜನೆಗಳಡಿ ಸರ್ಕಾರವು ಉಚಿತವಾಗಿ ನಿವೇಶನಗಳನ್ನು ಅಭಿವೃದ್ಧಿಪಡಿಸಿ, ಫಲಾನುಭವಿಗಳಿಗೆ ಉಚಿತವಾಗಿ ನಿವೇಶನ ಹಂಚಿಕೆ ಮಾಡುತ್ತಿರುವುದರಿಂದ ನಿವೇಶನದ ಬೆಲೆಯು ಫಲಾನುಭವಿಗಳಿಗೆ ನಿರ್ಬಂಧವಾಗುವುದಿಲ್ಲ.

ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ನಿವೇಶನ ಹಂಚಿಕೆಗೆ ಲಭ್ಯವಿರುವ ಒಟ್ಟು 4513 ಎಕರೆ ಜಮೀನನ್ನು ಅಭಿವೃದ್ಧಿಪಡಿಸಿ, ನಿವೇಶನ ಹಂಚಿಕೆಗೆ ಕ್ರಮವಹಿಲಾಗುತ್ತಿದೆ. ಸರ್ಕಾರದಿಂದ 2020-21ನೇ ಸಾಲಿನಲ್ಲಿ 1.24ಲಕ್ಷ ನಿವೇಶನಗಳನ್ನು ಹಂಚಿಕೆ ಮಾಡಲು ಉದ್ದೇಶಿಸಿದ್ದು, ಕ್ರಮವಹಿಸಲಾಗುತ್ತಿದೆ.

2. ನಿವೇಶನರಹಿತ ವ್ಯಕ್ತಿಗಳ ಸಮಸ್ಯೆಯನ್ನು ಪರಿಹರಿಸಲು ನವೀನ ಆಲೋಚನೆಗಳನ್ನು ಮಾಡಿ, ಮನವೊಲಿಸುವ ಮೂಲಕ ಅಥವಾ ಸ್ವಯಂಪ್ರೇರಣೆಯಿಂದ ಮನೆ ನಿವೇಶನಗಳ ರಚನೆಗೆ ಭೂಮಿಯನ್ನು ದಾನ ಮಾಡಲು ಸಿದ್ಧರಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳನ್ನು ಗುರುತಿಸುವ ಮೂಲಕ ಪ್ರಯತ್ನಿಸಬಹುದು. ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳು ಈ ನಿಟ್ಟಿನಲ್ಲಿ ಕೆಲಸ ಮಾಡಬೇಕು ಅಂತಹ ಲೇಔಟ್ ಗೆ ದಾನಿಗಳ ಹೆಸರನ್ನು ಇಡಬಹುದು.

ಕ್ರಮ:

ನಿವೇಶನರಹಿತ ವ್ಯಕ್ತಿಗಳ ಸಮಸ್ಯೆಯನ್ನು ಪರಿಹರಿಸಿ, ಸೂಕ್ತ ವಸತಿ ಸೌಕರ್ಯ ಕಲ್ಪಿಸಲು ಸರ್ಕಾರವು ಈ ಕೆಳಕಂಡ ರೀತಿಯಲ್ಲಿ ಪ್ರಯತ್ನಿಸುತ್ತಿದೆ.

1. ಸರ್ಕಾರವು 2011 ರಲ್ಲಿ ರಾಜ್ಯಾದ್ಯಂತ ಗ್ರಾಮೀಣ ಪ್ರದೇಶದಲ್ಲಿ ನಡೆಸಿದ ವಸತಿರಹಿತರ ಮತ್ತು ನಿವೇಶನರಹಿತರ ಸಮೀಕ್ಷೆಯಲ್ಲಿ ಕೈಬಿಟ್ಟು ಹೋಗಿರುವ ಅರ್ಹ ಕುಟುಂಬಗಳನ್ನು ಸಮೀಕ್ಷಾ ಪಟ್ಟಿಯಲ್ಲಿ ಸೇರಿಸುವ ಉದ್ದೇಶದಿಂದ 2018 ರಲ್ಲಿ ಪುನ: ಸಮೀಕ್ಷೆ ಕಾರ್ಯ ಕೈಗೊಂಡು ಅರ್ಹ ವಸತಿರಹಿತ ಮತ್ತು ನಿವೇಶನರಹಿತ ಕುಟುಂಬಗಳ ವಿವರವನ್ನು ರಾಜೀವ್ ಗಾಂಧಿ ವಸತಿ ನಿಗಮದ ವೆಬ್ ಸೈಟ್ ನಲ್ಲಿ ನಮೂದಿಸಲಾಗಿದೆ.
2. ನಗರ ಪ್ರದೇಶಕ್ಕೆ ಸಂಬಂಧಪಟ್ಟಂತೆ 2017 ಮತ್ತು 2018 ರಲ್ಲಿ ಅರ್ಹ ವಸತಿರಹಿತ ಮತ್ತು ನಿವೇಶನರಹಿತರ ಬೇಡಿಕೆ ಸಮೀಕ್ಷೆಯನ್ನು ರಾಜ್ಯಾದ್ಯಂತ ನಡೆಸಲಾಗಿದ್ದು ಒಟ್ಟು 271 ನಗರ ಸ್ಥಳೀಯ ಸಂಸ್ಥೆಗಳಿಂದ Housing for all Plan of Action ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಒಟ್ಟು 9.70 ಲಕ್ಷ ವಸತಿರಹಿತ ಕುಟುಂಬಗಳಿಗೆ ಯೋಜನೆಯನ್ನು ತಯಾರಿಸಿ ಸಲ್ಲಿಸಲಾಗಿದ್ದು, 579097 ಫಲಾನುಭವಿಗಳಿಗೆ ಕೇಂದ್ರ ಸರ್ಕಾರವು ಅನುಮೋದನೆ ನೀಡಿರುತ್ತದೆ.
3. ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ನಿವೇಶನ ಹಂಚಿಕೆಗೆ ಸಂಬಂಧಪಟ್ಟಂತೆ ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಪ್ರತಿ ತಿಂಗಳು (ಕಳೆದ 23 ತಿಂಗಳುಗಳಿಂದ) ವೀಡಿಯೋ ಸಂವಾದ ನಡೆಸಲಾಗುತ್ತಿದ್ದು, ನಿವೇಶನರಹಿತರ ಸಂಖ್ಯೆಗೆ ಅನುಗುಣವಾಗಿ ಸರ್ಕಾರಿ ಜಮೀನನ್ನು ಗುರುತಿಸಿ, ಕಾಯ್ದಿರಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗುತ್ತಿದೆ.
4. ಸರ್ಕಾರಿ ಜಮೀನಿಗೆ ಪ್ರಥಮ ಆದ್ಯತೆ ನೀಡಲಾಗಿದ್ದು, ವಸತಿಗೆ ಸೂಕ್ತವಾದ ಸರ್ಕಾರಿ ಜಮೀನನ್ನು ಗುರುತಿಸಿ, ಆದ್ಯತೆ ಮೇಲೆ ಕಾಯ್ದಿರಿಸಲು ಈಗಾಗಲೇ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ಹೆಚ್ಚು ಹೆಚ್ಚು ಜಮೀನನ್ನು ಗುರುತಿಸುವ ಮತ್ತು ಮಂಜೂರಾತಿ ನೀಡುವ ಕಾರ್ಯ ಪ್ರಗತಿಯಲ್ಲಿರುತ್ತದೆ.
5. ಸರ್ಕಾರಿ ಜಮೀನು ಲಭ್ಯವಿಲ್ಲದ ಕಡೆಗಳಲ್ಲಿ ಖಾಸಗಿ ಜಮೀನನ್ನು ಭೂಮಾಲೀಕರ ಸಹಮತದೊಂದಿಗೆ ಜಿಲ್ಲಾ ಜಮೀನು ಖರೀದಿ ಸಮಿತಿಯ ಮೂಲಕ ಖರೀದಿಸಿ, ನಿವೇಶನ ಹಂಚಿಕೆ ಮಾಡಲಾಗುತ್ತಿದೆ.
6. ಹೀಗೆ ಮಂಜೂರಾತಿಯಾದ ಸರ್ಕಾರಿ ಅಥವಾ ಖರೀದಿಸಲಾದ ಖಾಸಗಿ ಜಮೀನಿನಲ್ಲಿ ನಿವೇಶನಗಳನ್ನು ಅಭಿವೃದ್ಧಿಪಡಿಸಲು ಜಿಲ್ಲಾ ಮಟ್ಟದಲ್ಲಿ ಸೂಕ್ತ ನಿರ್ಮಾಣ ಸಂಸ್ಥೆಗಳ ಮೂಲಕ ನಿವೇಶನಗಳನ್ನು ಅಭಿವೃದ್ಧಿಪಡಿಸಿ ನಿವೇಶನ ಹಂಚಿಕೆ ಮಾಡಲಾಗುತ್ತಿದೆ.
7. ನಗರ ಪ್ರದೇಶಗಳಲ್ಲಿ ವೈಯಕ್ತಿಕ ನಿವೇಶನ ಹಂಚಿಕೆ ಮಾಡಲು ಜಮೀನಿನ ಕೊರತೆ ಇರುವುದರಿಂದ ಹಾಗೂ ಖಾಸಗಿ ಜಮೀನಿನ ಬೆಲೆಯು ಹೆಚ್ಚಾಗಿರುವುದರಿಂದ ಪ್ರಸ್ತುತ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಲಭ್ಯವಿರುವ ಸರ್ಕಾರಿ/ಖರೀದಿಸಲಾದ ಜಮೀನಿನಲ್ಲಿ ಬಹುಮಹಡಿ ಮಾದರಿಯಲ್ಲಿ ಮನೆಗಳನ್ನು ನಿರ್ಮಿಸಿ, ಹಂಚಿಕೆ ಮಾಡಲಾಗುತ್ತಿದೆ. ಇದರಿಂದ ಹೆಚ್ಚಿನ ಸಂಖ್ಯೆಯ ವಸತಿರಹಿತ ಮತ್ತು ನಿವೇಶನರಹಿತ ಕುಟುಂಬಗಳಿಗೆ ವಸತಿ ಸೌಕರ್ಯ ಒದಗಿಸಿದಂತಾಗುತ್ತದೆ.
8. ನಗರದಲ್ಲಿರುವ ನಿವೇಶನರಹಿತ ಕುಟುಂಬಗಳಿಗೆ ವಸತಿ ಬೇಡಿಕೆ ಪೂರೈಸಲು ಖಾಸಗಿ ಸಹಭಾಗಿತ್ವದಲ್ಲಿ ಬಹುಮಹಡಿ ಮಾದರಿಯಲ್ಲಿ ಮನೆಗಳನ್ನು ನಿರ್ಮಿಸಲು ಕ್ರಮಕೈಗೊಳ್ಳಲಾಗುತ್ತಿದೆ.
9. ಕೇಂದ್ರ ಸರ್ಕಾರವು "Affordable Rental Housing Complexes" ಎಂಬ ನೂತನ ಯೋಜನೆಯನ್ನು ಜಾರಿಗೊಳಿಸಿದ್ದು ನಗರದ ಬಡ ವಲಸೆ ಕುಟುಂಬಗಳಿಗೆ ಬಾಡಿಗೆ ಮನೆಗಳನ್ನು ಖಾಸಗಿ ಸಹಭಾಗಿತ್ವದಲ್ಲಿ ನಿರ್ಮಿಸಲು ಕ್ರಮವಹಿಸಲಾಗುತ್ತಿದೆ.

10. ಬೆಂಗಳೂರು ಮಹಾನಗರ ಪಾಲಿಕೆ/ಬಿ.ಡಿ.ಎ. ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಅತ್ಯಧಿಕ ಸಂಖ್ಯೆಯ ವಸತಿರಹಿತ/ನಿವೇಶನರಹಿತ ಬಡವರು, ಆರ್ಥಿಕ ದುರ್ಬಲ ವರ್ಗದವರಿಗೆ ನಿವೇಶನ ಸೌಕರ್ಯ ಕಲ್ಪಿಸಲು ಜಮೀನಿನ ಕೊರತೆಯಿರುವುದರಿಂದ ಅರ್ಹ ವಸತಿರಹಿತ ಮತ್ತು ನಿವೇಶನರಹಿತ ಕುಟುಂಬಗಳಿಗೆ ಬಹುಮಹಡಿ 1 ಲಕ್ಷ ಬೆಂಗಳೂರು ವಸತಿ ಯೋಜನೆಯನ್ನು ಜಾರಿಗೆ ತಂದಿದ್ದು, ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಿ, ಈಗಾಗಲೇ ಪ್ರಥಮ ಹಂತದಲ್ಲಿ 48614 ಅರ್ಜಿದಾರರಿಗೆ ಆಯ್ಕೆ ಪತ್ರ ವಿತರಿಸಲಾಗಿದೆ. ಪ್ರಸ್ತುತ ಎರಡನೇ ಹಂತದಲ್ಲಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು ದಿನಾಂಕ: 02.09.2020 ರವರೆಗೆ 12206 ಅರ್ಜಿಗಳು ಸ್ವೀಕೃತವಾಗಿರುತ್ತವೆ. ಪ್ರಸ್ತುತ ಆನ್ ಲೈನ್ ಅರ್ಜಿ ಸ್ವೀಕೃತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

11. 2018-19ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ 237 ಮತ್ತು 238 ರಲ್ಲಿ ಬಹುಮಹಡಿ ಕಟ್ಟಡ ನಿರ್ಮಾಣ ಯೋಜನೆಯನ್ನು ರಾಜ್ಯದ ಎಲ್ಲಾ ನಗರ ಪ್ರದೇಶಗಳಿಗೂ ವಿಸ್ತರಿಸಿ "ಮುಖ್ಯಮಂತ್ರಿಗಳ ನಗರ ವಸತಿ ಯೋಜನೆ" ಎಂಬ ಹೆಸರಿನ ಯೋಜನೆಯನ್ನು ಜಾರಿಗೆ ತರಲು ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ 2000 ಎಕರೆ, ಮಹಾನಗರಪಾಲಿಕೆಗಳಲ್ಲಿ 500 ಎಕರೆ, ನಗರಸಭೆ/ಪುರಸಭೆ ವ್ಯಾಪ್ತಿಗಳಲ್ಲಿ 250 ಎಕರೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ 100 ಎಕರೆ ಸರ್ಕಾರಿ ಜಮೀನನ್ನು ವಸತಿಗಾಗಿ ಮೀಸಲಿಡಲು ಉದ್ದೇಶಿಸಲಾಗಿದೆ. ಈ ಸಂಬಂಧ ಈಗಾಗಲೇ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

3. ಫಲಾನುಭವಿಗಳಿಗೆ ಅವರ ಜೀವನ ಮಟ್ಟವನ್ನು ಸುಧಾರಿಸಲು ಒಳಚರಂಡಿ ವ್ಯವಸ್ಥೆ, ಆಟದ ಮೈದಾನಗಳು, ಉದ್ಯಾನವನಗಳು ಮುಂತಾದ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಸುಧಾರಿತ ವಾತಾವರಣವು ಖಂಡಿತವಾಗಿಯೂ ಅವರ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯವನ್ನು ಹಾಗೂ ಆರೋಗ್ಯ ಮತ್ತು ಶಿಕ್ಷಣ ಮಟ್ಟವನ್ನು ಹೆಚ್ಚಿಸುತ್ತದೆ.

**ಕ್ರಮ:**

ಸರ್ಕಾರದಿಂದ ಉಚಿತ ನಿವೇಶನ ಪಡೆದ ಫಲಾನುಭವಿಗಳಿಗೆ ಆದ್ಯತೆ ಮೇರೆಗೆ ವಿವಿಧ ವಸತಿ ಯೋಜನೆಗಳಡಿ ಆಯ್ಕೆ ಮಾಡಿ ವಸತಿ ಸೌಕರ್ಯ ಕಲ್ಪಿಸಲಾಗುತ್ತಿದೆ. ಆಶ್ರಯ ಬಡಾವಣೆಗಳಲ್ಲಿ ಶೇಕಡಾ 50 ರಷ್ಟು ಮನೆಗಳ ಭೌತಿಕ ಪ್ರಗತಿಯ ನಂತರ ಸದರಿ ಬಡಾವಣೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

ನಿವೇಶನಗಳ ರಚನೆ ಮತ್ತು ಅಭಿವೃದ್ಧಿಯೊಂದಿಗೆ ಬಡಾವಣೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿದ್ದಲ್ಲಿ ಏಕ ಕಾಲದಲ್ಲಿ ನಿವೇಶನ ಹಂಚಿಕೆ, ಬಡಾವಣೆ ಅಭಿವೃದ್ಧಿ ಮತ್ತು ಆದ್ಯತೆ ಮೇರೆಗೆ ಫಲಾನುಭವಿಗಳಿಗೆ ವಸತಿ ಸೌಕರ್ಯ ಒದಗಿಸುವ ಉದ್ದೇಶದಿಂದ ನಿವೇಶನ ಯೋಜನೆಯನ್ನು ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಸಂಯೋಜಿಸಿ, ಅನುಷ್ಠಾನಗೊಳಿಸಲಾಗುತ್ತಿದೆ. ಇತರೆ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಚರಂಡಿ, ವಿದ್ಯುತ್ ಮತ್ತು ರಸ್ತೆಗಳನ್ನು ಅಭಿವೃದ್ಧಿಪಡಿಸಲು ಒಂದು ಎಕರೆ ಜಮೀನಿಗೆ ಕನಿಷ್ಠ ರೂ.40 ರಿಂದ 50ಲಕ್ಷಗಳ ಅನುದಾನದ ಅವಶ್ಯಕತೆಯಿದ್ದು, ಸದರಿ ಅನುದಾನವನ್ನು ಸರ್ಕಾರದಿಂದ ಒದಗಿಸಲಾಗುತ್ತಿದೆ. ಅಲ್ಲದೇ ಸ್ಥಳೀಯ ಸಂಸ್ಥೆಗಳ ಮೂಲಕ ಬಡಾವಣೆಗಳಿಗೆ ಆಟದ ಮೈದಾನ ಮತ್ತು ಉದ್ಯಾನವನ ಮುಂತಾದ ಮೂಲಭೂತ ಸೌಕರ್ಯಗಳನ್ನು ನೀಡಲಾಗುತ್ತಿದೆ.